ಮೈಸೂರ ಗೆಜೆಟ್ಟ

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ನವಂಬರ್ ತಾ|| 26, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಖಾಗ.

ಇಂಡ್ಯಗವರ್ಮೆಂಟ್, ರೆಸಿಡಂಟರು, ಚೀಫ್ ಜಡ್ಜ್ಗಳು, ವಗ್ಗೈರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫೈನ್ಯಾಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್ಗಳನ್ನು ಎಫೇಸ್ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜೂ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಟಿಕೇಟೂದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇಸ್ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸರ್ಸ್,
ಕಾಂಪ್ಟ್ರೋಲರ್.

ಇನಾಂ ಇಲಾಖೆ.

ನಂ. 1. ತಾರೀಖು 19ನೇ ನವಂಬರು 1887.

ಇನಾಂದಾರರಿಗೆ ಯಿದರಿಂದ ತಿಳಿಸುವದೇನಂದರೆ, ಲೇಟು ದೊಡ್ಡೇರಿ (ಹಾಲಿಚಳ್ಳಕೆರೆ) ತಾಲ್ಲೂಕಿನಲ್ಲಿ ಯಿರತಕ್ಕ ಜಿಲ್ಲರೆ ಇನಾಂಗಳ ಬಾಬತು 136 ಫೈನಲ್ಟೈಟಲ್ಡೀಡ್ಡು ಯಾನೆ ಖಾಯಂ ಪಟ್ಟೇಗಳು ಚಿತ್ರದುರ್ಗ ಡಿಸ್ಟ್ರಿಕ್ಟು ಡೆಪ್ಯೂಟಿ ಕಮ್ಮಿಷನರವರಿಗೆ ಬಟವಾಡೇ ಬಗ್ಗೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟವು.